ಪಿಡಬ್ಲ್ಯೂಃ 1

ಇಂದು ದಿನಾಂಕಃ 25.11.2020 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿಯ ಪರ ಶ್ರೀ ಪಿ.ಬಿ.ಜಿ. ವಕೀಲರಿಂದಃ

ನಾನು ನನ್ನ ಮೌಖಿಕ ವಿಚಾರಣೆಯ ಬದಲಾಗಿ ನನ್ನ ಸಾಕ್ಷಿ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳನ್ನು ನಾನೇ ಖುದ್ದಾಗಿ ವಕೀಲರಿಗೆ ತಿಳಿಯಿಸಿ, ಬರೆಯಿಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ನಿಜವಿದ್ದು, ಅದರಲ್ಲಿರುವ ಸಹಿಯು ನನ್ನದೇ ಆಗಿರುತ್ತದೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಶಾನೆಕರಿಸಬೇಕೆಂದು ವಿನಂತಿಸಿಕೊಳ್ಳುತ್ತೇನೆ.

3 ಗ್ರಾಮ ನಮೂನೆ 8 ಅ ರ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿಪಿ-1 ರಿಂದ ನಿಪಿ-3 ಎಂದು, 11 ಪಹಣಿ ಪತ್ರಿಕೆಗಳನ್ನು ಹಾಜರು ಮಾಡಿದ್ದು ಅವುಗಳನ್ನು ಕ್ರಮವಾಗಿ ನಿಪಿ-4 ರಿಂದ 14 ಎಂದು, ಕರ ನಿರ್ಧರಣ ಪಟ್ಟಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿಪಿ-15 ಎಂದು, ಡ ನಂಬರಃ 924 ರ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿಪಿ-16 ಎಂದು, ದೃಢೀಕೃತ ವರದಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-17 ಎಂದು, ದೃಢೀಕೃತ ಫಾರ್ಮ್ ಯು ನೋಟೀಸನ್ನು ಹಾಜರು ಮಾಡಿದ್ದು ಅದನ್ನು ನಿಪಿ-18 ಎಂದು, ದೃಢೀಕೃತ ಡ ಸಂಖ್ಯೆಃ 1558 ನ್ನು ಹಾಜರು ಮಾಡಿದ್ದು ಅದನ್ನು ನಿಪಿ-19 ಎಂದು, 3 ದೃಢೀಕೃತ ಕೈ ಬರವಣಿಗೆಯ ಪಹಣಿ ಪತ್ರಿಕೆಗಳನ್ನು ಹಾಜರು ಮಾಡಿದ್ದು ಅವುಗಳನ್ನು ನಿಪಿ-20 ರಿಂದ ನಿಪಿ-22 ಎಂದು, ದೃಢೀಕೃತ ಮರಣ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-23 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಪ್ರತಿವಾದಿಗಳ ಪರ ಶ್ರೀ ಬಿ.ಎನ್.ಬಿ. ವಕೀಲರಿಂದಃ

ಪಾಟೀ ಸವಾಲಿಗೆ ವಕೀಲರು ಸಮಯಾವಕಾಶ ಕೋರಿದ್ದು, ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

Sd/-

ಓ ಹೇ ಕೇ ಸರಿ ಇದೆ.

ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.